*

<u>ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ..... ಚಿತ್ತಾಪೂರ</u>

C.C: 66/2018
CW-10 PW-3

ಹೆಸರು : ಚಿತ್ರ ಶೇಖರ

ತಂದೆಯ ಹೆಸರು : ನಾಗಣ್ಣ ಪೂಜಾರಿ

ವಯಸ್ಸು : 36 ವರ್ಷ

ಉದ್ಯೋಗ : ಒಕ್ಕಲುತನ

ವಾಸ ಸ್ಥಳ : ಚಿತ್ತಾಪುರ

---

<u>ಪ್ರಮಾಣವಚನ ಭೋಧಿಸಲಾಯಿತು. ದಿಃ 13.03.2026</u>

<u>ಮುಖ್ಯ ವಿಚಾರಣೆಃ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರಿಂದ</u>

ನನಗೆ ಚಾಸಾ-1 ರಿಂದ 9 ರವರ ಪರಿಚಯ ಇಲ್ಲ.

ನಾನು ಯಾವುದೇ ಅಪಘಾತವನ್ನು ನೋಡಿಲ್ಲ. ನನ್ನ ಸಮಕ್ಷಮ ಆರೋಪಿತನ ತಪ್ಪಿನಿಂದ ಯವುದೇ ಅಪಘಾತ ಆಗಿಲ್ಲ ಮತ್ತು ಮಲ್ಲಿಕಾರ್ಜುನ್ ಇವನು ಅಪಘಾತದಲ್ಲಿ ನನ್ನ ಸಮಕ್ಷಮ ತೀರಿಕೊಂಡಿಲ್ಲ. ನಾನು ಪೋಲೀಸರ ಬಳಿ ಯಾವುದೇ ಹೇಳಿಕೆ ನೀಡಿಲ್ಲ.

(ಮಾನ್ಯ ಸ ಸ ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ದಾಖಲೆಗಳನ್ನು ಪರಿಶೀಲಿಸಿ ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ನೀಡಲಾಯಿತು.)

<u>ಪಾಟೀ ಸವಾಲುಃ ಸ.ಸ.ಅಭಿಯೋಜಕರವರಿಂದ</u>

ದಿಃ02.01.2018ರಂದು ಹೇಗಿದ್ದು -----------------------------ನಿಜವಿರುತ್ತದೆ ಎಂದು ಪೋಲೀಸರ ಬಳಿ ಹೇಳಿಕೆ ನೀಡಿದ್ದೀರಿ ಎಂದರೆ ಸರಿಯಲ್ಲ. ಸಾಕ್ಷಿಗೆ ಈಗ ಓದಿ ಹೇಳಿದ ಮತ್ತು ಸಾಕ್ಷಿ ಅಲ್ಲಗಳೆದ ಹೇಳಿಕೆಯನ್ನು ನಿಪಿ- 4 ಎಂದು ಗುರುತಿಸಲಾಯಿತು. ನಿಪಿ- 4ರಂತೆ

ಹೇಳಿಕೆ ನೀಡಿದ್ದರೂ ಸಹ ಈಗ ಆರೋಪಿಯೊಂದಿಗೆ ರಾಜಿ ಮಾಡಿಕೊಂಡು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ ಆರೋಪಿ ಪರ ಶ್ರೀ.ಎಸ್.ಎನ್.ಪಿ. ವಕೀಲರಿಂದ - ಏನು ಇಲ್ಲಾ</u>

ಮರು ವಿಚಾರಣೆ ಇಲ್ಲಾ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು )

ಓ. ಹೇ ಕೇ.ಸರಿ ಇದೆ.

ಸಿವಿಲ್ & J.M.F.C ನ್ಯಾಯಾಧೀಶರು,
ಚಿತ್ತಾಪೂರ.

*

<u>ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ..... ಚಿತ್ತಾಪೂರ</u>

C.C: 66/2018
CW-3 PW-2

ಹೆಸರು : ಮರಿಲಿಂಗ್

ತಂದೆಯ ಹೆಸರು : ನಾಗಣ್ಣ ಹಂದ್ರಕಿ

ವಯಸ್ಸು : 36 ವರ್ಷ

ಉದ್ಯೋಗ : ಒಕ್ಕಲುತನ

ವಾಸ ಸ್ಥಳ : ಗೋಳಾ ಕೆ. ಈಗ ಶಹಬಾದ್

---

<u>ಪ್ರಮಾಣವಚನ ಭೋಧಿಸಲಾಯಿತು. ದಿಃ 13.03.2026</u>

<u>ಮುಖ್ಯ ವಿಚಾರಣೆಃ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರಿಂದ</u>

ನನಗೆ ಚಾಸಾ-1ರವರ ಪರಿಚಯ ಇದೆ. ಅವರು ತೀರಿಕೊಂಡಿರುತ್ತಾರೆ. ಚಾಸಾ-2, 4 ರಿಂದ 10 ರವರ ಪರಿಚಯ ಇದೆ. ನಾನು ಆರೋಪಿಯನ್ನು ಈ ಮೊದಲು ನೋಡಿಲ್ಲ.

ಸುಮಾರು 8 ವರ್ಷಗಳ ಹಿಂದೆ ನಾನು ಮತ್ತು ಮಲ್ಲಿಕಾರ್ಜುನ್ ಬೈಕ್ ನ ಮೇಲೆ ಶ್ರೀ ಸಿಮೆಂಟ್ ಕಂಪನಿಗೆ ಕೆಲಸಕ್ಕೆ ಹೋಗುತ್ತಿದ್ದೆವು. ಆ ದಿನ ಮೃತ ಮಲ್ಲಿಕಾರ್ಜುನ ಬೈಕನ್ನು ಚಲಾಯಿಸುತ್ತಿದ್ದ. ಆ ಸುಮಯದಲ್ಲಿ ನಮಗೆ ಅಪಘಾತ ಆಗಿರುತ್ತದೆ. ನಾನು ಹಿಂದೆ ಕುಳಿತಿದ್ದ ಕಾರಣ ಅಪಘಾತ ಹೇಗೆ ಆಯಿತು ಎಂದು ನನಗೆ ಮಾಹಿತಿ ಇಲ್ಲ. ನನ್ನ ಪ್ರಕಾರ ಆರೋಪಿತನ ತಪ್ಪಿನಿಂದ ಅಪಘಾತ ಆಗಿಲ್ಲ. ನಾನು ಪೋಲೀಸರ ಬಳಿ ಯಾವುದೇ ಹೇಳಿಕೆ ನೀಡಿಲ್ಲ ಮತ್ತು ಪೋಲೀಸರು ನನಗೆ ಎಂದಿಗೂ ಆರೋಪಿಯನ್ನು ತೋರಿಸಿಲ್ಲ.

(ಮಾನ್ಯ ಸ ಸ ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ದಾಖಲೆಗಳನ್ನು ಪರಿಶೀಲಿಸಿ ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ನೀಡಲಾಯಿತು.)

<u>ಪಾಟೀ ಸವಾಲುಃ ಸ.ಸ.ಅಭಿಯೋಜಕರವರಿಂದ</u>

ದಿಃ25.11.2017ರಂದು ಹೀಗಿದ್ದು -----------------------------ನಿಜವಿದೆ ಎಂದು ಪೋಲೀಸರ ಬಳಿ ಹೇಳಿಕೆ ನೀಡಿದ್ದೀರಿ ಎಂದರೆ ಸರಿಯಲ್ಲ. ಸಾಕ್ಷಿಗೆ ಈಗ ಓದಿ ಹೇಳಿದ ಮತ್ತು ಸಾಕ್ಷಿ ಅಲ್ಲಗಳೆದ ಹೇಳಿಕೆಯನ್ನು ನಿಪಿ- 3 ಎಂದು ಗುರುತಿಸಲಾಯಿತು. ನಿಪಿ- 3 ರಂತೆ ಹೇಳಿಕೆ ನೀಡಿದ್ದರೂ ಸಹ ಈಗ ಆರೋಪಿಯೊಂದಿಗೆ ರಾಜಿ ಮಾಡಿಕೊಂಡು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿ ಪರ ಶ್ರೀ.ಎಸ್.ಎನ್.ಪಿ. ವಕೀಲರಿಂದ - ಏನು ಇಲ್ಲಾ

ಮರು ವಿಚಾರಣೆ ಇಲ್ಲಾ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು )

ಓ. ಹೇ ಕೇ.ಸರಿ ಇದೆ.

ಸಿವಿಲ್ & J.M.F.C ನ್ಯಾಯಾಧೀಶರು,
ಚಿತ್ತಾಪೂರ.